ಕರ್ನಾಟಕ ಪರೀಕ್ಷಾ ಪ್ರಾಧಿಕಾರ

# KARNATAKA EXAMINATIONS AUTHORITY

ಸಂಖ್ಯೆ: ಇಡಿ/ಕೆಇಎ/ ಫಾರ್ಮ ಸೈನ್ಸ್/2018 ದಿನಾಂಕ: 10-09-2018

## ಸಿಇಟಿ-2018 – ಫಾರ್ಮ್ ಸೈನ್ಸ್ ಸೀಟು ಹಂಚಿಕೆ ಸೂಚನೆಗಳು

ಎರಡನೇ ಮುಂದುವರಿದ ಸುತ್ತಿನ ನಂತರ ರದ್ದುಗೊಂಡಿರುವ, ಹೊಸದಾಗಿ ಸೇರಲ್ಪಟ್ಟ ಕೃಷಿ ವಿಜ್ಞಾನ, ವೆಟರಿನರಿ ಮುಂತಾದ ಫಾರ್ಮ್ ಸೈನ್ಸ್ ಕೋರ್ಸುಗಳಿಗೆ ಸೀಟು ಹಂಚಿಕೆಯನ್ನು ಈ ಕೆಳಗಿನ ವೇಳಾಪಟ್ಟಿಯಂತೆ ನಡೆಸಲಾಗುವುದು. ಈ ಸುತ್ತಿನಲ್ಲಿ, ರದ್ದುಪಡಿಸಿಕೊಂಡಿರುವ / ಹೊಸದಾಗಿ ಸೇರ್ಪಡೆಯಾದ / ಕಾಲೇಜಿಗೆ ಪ್ರವೇಶ ಪಡೆಯದೆ ಇರುವ ಕೃಷಿ ವಿಜ್ಞಾನ, ವೆಟರಿನರಿ (ಫಾರ್ಮ್ ಸೈನ್ಸ್) ಸೀಟುಗಳನ್ನು 2018ನೇ ಸಾಲಿನಲ್ಲಿ ರ್‍ಯಾಂಕ್ ಪಡೆದಿರುವ ಅಭ್ಯರ್ಥಿಗಳಿಗೆ ಈ ಸುತ್ತಿನಲ್ಲಿ ವೇಳಾಪಟ್ಟಿಯಂತೆ ಆಯ್ಕೆಗೆ ಅವಕಾಶ ಕಲ್ಪಿಸಲಾಗುವುದು. ಈ ಮೇಲೆ ತಿಳಿಸಿರುವ ಸೀಟುಗಳ ಜೊತೆಯಲ್ಲಿ ಸೀಟು ಹಂಚಿಕೆಯ ಸಂದರ್ಭ ದಲ್ಲಿ ಆಗಿಂದಾಗ್ಗೆ ಉದ್ಭವಿಸುವ ಕೃಷಿ ವಿಜ್ಞಾನ ಮತ್ತು ವೆಟರಿನರಿ ಸೀಟುಗಳನ್ನೂ ಸಹ ಹಂಚಿಕೆ ಮಾಡಲಾಗುವುದು. ಇಚ್ಛೆಯುಳ್ಳ ಅರ್ಹ ಅಭ್ಯರ್ಥಿಗಳು ಈ ಕೆಳಗಿನ ವೇಳಾಪಟ್ಟಿಯಂತೆ ಹೊಸದಾಗಿ ಇಚ್ಛೆ / ಆಯ್ಕೆಯನ್ನು ದಾಖಲಿಸಿ ಈ ಸುತ್ತಿನಲ್ಲಿ ಭಾಗವಹಿಸಬಹುದಾಗಿದೆ.

| Sl. No. | Particulars | Date and Time |
|---|---|---|
| 01 | Display of Seat Matrix (Available) | 11-09-2018 after 4.00 pm |
| 02 | Option Entry by Eligible Candidates | From 1.00 pm on 17-09-2018 to 19-09-2018 up to 11.00 am |
| 03 | Publication of Seat Allotment Results | 19-09-2018 after 6.00 pm |
| 04 | Confirmation of Allotment, Payment of Fees and Downloading of Admission Order | 20-09-2018 to 23-09-2018 |
| 05 | Last date for reporting to college | 24-09-2018 before 5.30 pm |

**ಸೂಚನೆ:**

1. ಈ ಸುತ್ತಿನಲ್ಲಿ ಅಭ್ಯರ್ಥಿಗಳು ಫಾರ್ಮ್ ಕೋರ್ಸುಗಳಿಗೆ ಹೊಸದಾಗಿ ಇಚ್ಛೆ / ಆಯ್ಕೆ ಅನ್ನು ದಾಖಲಿಸಬೇಕು. ಈ ಮೊದಲು ದಾಖಲಿಸಿದ್ದ ಆಪ್ಷನ್ ಗಳನ್ನು ಪರಿಗಣಿಸಲಾಗುವುದಿಲ್ಲ.
2. ಸೀಟ್ ಮ್ಯಾಟ್ರಿಕ್ಸ್‌ನಲ್ಲಿ ಸೀಟುಗಳ ಲಭ್ಯತೆ ಇಲ್ಲದಿದ್ದರೂ ಸಹ ಅಭ್ಯರ್ಥಿಗಳು ಆದ್ಯತೆಗಳನ್ನು ಸೇರಿಸಬಹುದು ಯಾಕೆಂದರೆ ಸೀಟು ಹಂಚಿಕೆಯ ಕಾರ್ಯದಲ್ಲಿ ಉದ್ಭವಿಸುವ ಕೃಷಿ ವಿಜ್ಞಾನ / ವೆಟರಿನರಿ ಕೋರ್ಸುಗಳ ಸೀಟುಗಳನ್ನೂ ಸಹ ಹಂಚಿಕೆ ಮಾಡಲಾಗುವುದು.

**ವಿಶೇಷ ಸೂಚನೆ:** ಈಗಾಗಲೆ ಸೀಟನ್ನು ಪಡೆದು ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ಅಭ್ಯರ್ಥಿಗಳು ಈ ಸುತ್ತಿನಲ್ಲಿ ಭಾಗವಹಿಸುವ ಮೊದಲು ಪೋಷಕರೊಡನೆ ಚರ್ಚಿಸಿ ಯೋಚಿಸಿ **ಕೃಷಿ ವಿಜ್ಞಾನ / ವೆಟರಿನರಿ** ಕೋರ್ಸುಗಳಲ್ಲಿ ಇಷ್ಟವಿದ್ದಲ್ಲಿ ಮಾತ್ರ ಭಾಗವಹಿಸಲು ಕೋರಿದೆ. ಈ ಸುತ್ತಿನಲ್ಲಿ ಸೀಟು ಹಂಚಿಕೆಯಾದಲ್ಲಿ, ಮೊದಲು ಪ್ರವೇಶ ಪಡೆದಿದ್ದ ಕಾಲೇಜಿನ ಸೀಟು ತಂತಾನೆ ರದ್ದುಗೊಳ್ಳುತ್ತದೆ ಮತ್ತು ಯಾವುದೇ ಕಾರಣಕ್ಕೂ ಪ್ರಸ್ತುತ ವ್ಯಾಸಂಗ ಮಾಡುತ್ತಿರುವ ಕಾಲೇಜಿನಲ್ಲಿ **ಮುಂದುವರಿಯಲು ಸಾಧ್ಯವಾಗುವುದಿಲ್ಲ** ಅಂತಹ ಅಭ್ಯರ್ಥಿಗಳು ಈ ಸುತ್ತಿನಲ್ಲಿ ಹಂಚಿಕೆಯಾಗುವ ಕಾಲೇಜಿನಲ್ಲಿ ನಿಗದಿತ ದಿನಾಂಕದೊಳಗೆ ಪ್ರವೇಶವನ್ನು ಪಡೆಯಲೇಬೇಕು. ಒಂದು ವೇಳೆ ಈ ಸುತ್ತಿನಲ್ಲಿ ಹಂಚಿಕೆಯಾದ ಸೀಟಿಗೆ ಪ್ರವೇಶ ಪಡೆಯದಿದ್ದಲ್ಲಿ ಅಭ್ಯರ್ಥಿಯು ಎರಡೂ ಕಡೆ ಸೀಟು ಕಳೆದು ಕೊಳ್ಳುತ್ತಾನೆ ಯಾವುದೇ ಸೀಟನ್ನು ಹೊಂದಿರುವುದಿಲ್ಲ ಹಾಗು ಯಾವುದೇ ಫೀ ಮರು ಪಾವತಿ ಮಾಡುವುದಿಲ್ಲ. ಈ ಸುತ್ತಿನಲ್ಲಿ ಹಂಚಿಕೆಯಾದ ನಂತರ ಕಡ್ಡಾಯವಾಗಿ ಕಾಲೇಜಿಗೆ ಪ್ರವೇಶ ಪಡೆಯಬೇಕು.

ಈ ಕೆಳಗಿನ ವರ್ಗಗಳಲ್ಲಿನ ಅಭ್ಯರ್ಥಿಗಳು ಈ ಸುತ್ತಿನಲ್ಲಿ ಭಾಗವಹಿಸಲು ಅರ್ಹರಿರುವುದಿಲ್ಲ.

1. ವೈದ್ಯಕೀಯ ಸೀಟು ಪಡೆದು ಕಾಲೇಜಿಗೆ ಪ್ರವೇಶ ಪಡೆದವರು.
2. **ಫಾರ್ಮ ಸೈನ್ಸ್** ಕೋರ್ಸುಗಳ ಸೀಟುಗಳನ್ನು ರದ್ದುಪಡಿಸಿಕೊಂಡವರು
3. **ಫಾರ್ಮ ಸೈನ್ಸ್** ಕೋರ್ಸುಗಳಿಗೆ ಹಂಚಿಕೆಯಾದ ಸೀಟುಗಳಿಗೆ ನಿಗದಿತ ಶುಲ್ಕವನ್ನು ಪಾವತಿಸದೇ ಇರುವವರು.

ಕಾರ್ಯನಿರ್ವಾಹಕ ನಿರ್ದೇಶಕರ ಪರವಾಗಿ.

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012.**
18th Cross, Sampige Road, Malleshwaram, Bangalore – 560 012.
Phone: 080-2356 4583, 2336 1786, Fax: 080-2346 1576
Website : http://kea.kar.nic.in e-mail : keauthority-ka@nic.in